ಕರ್ನಾಟಕ ಸರ್ಕಾರ

ಜನವರಿ 27, 2018

# ಮಹದಾಯಿ ನದಿ ನೀರು ಹಂಚಿಕೆ ಕುರಿತ ಸಮಸ್ಯೆ ಬಗೆಹರಿಸಲು ಮಾತುಕತೆಗೆ ಸಿದ್ಧ, ಗೋವಾ ಮುಖ್ಯಮಂತ್ರಿ ಸಂಧಾನ ಸಭೆ ಆಯೋಜಿಸಿದರೆ ಅಲ್ಲಿನ ಕಾಂಗ್ರೆಸ್ ಪಕ್ಷದ ಮುಖಂಡರ ಮನವೊಲಿಸಲೂ ಪ್ರಯತ್ನಿಸುವೆ : ಸಿದ್ದರಾಮಯ್ಯ



ಬೆಂಗಳೂರು, ಜನವರಿ 27:

ಮಹದಾಯಿ ನದಿ ನೀರು ಹಂಚಿಕೆ ಕುರಿತಂತೆ ಉದ್ಭವಿಸಿರುವ ಸಮಸ್ಯೆ ಬಗೆಹರಿಸಲು ಗೋವಾ ಮುಖ್ಯಮಂತ್ರಿ ಮನೋಹರ್ ಪರಿಕ್ಕರ್ ಅವರು ತಮ್ಮನ್ನು ಮಾತುಕತೆಗೆ ಆಹ್ವಾನಿಸಿದರೆ ಮಾತುಕತೆಯಲ್ಲಿ ಪಾಲ್ಗೊಳ್ಳಲು ತಾವು ಸದಾ ಸಿದ್ಧ. ಅಲ್ಲದೆ, ಮುಖ್ಯಮಂತ್ರಿಗಳ ಸಂಧಾನ ಸಭೆಯನ್ನು ಆಯೋಜಿಸಿ ತಮ್ಮನ್ನು ಮಾತುಕತೆಗೆ ಕರೆದದ್ದೇ ಆದಲ್ಲಿ ಅಲ್ಲಿನ ಕಾಂಗ್ರೆಸ್ ಪಕ್ಷದ ಮುಖಂಡರೊಂದಿಗೆ ಮಾತುಕತೆ ನಡೆಸಿ ಅವರ ಮನವೊಲಿಸಲು ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಇಲ್ಲಿ ಇಂದು ಸ್ಪಷ್ಟಪಡಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮುಂದಿನ ಒಂದೆರಡು ದಿನಗಳಲ್ಲಿ ತಮ್ಮ ಪತ್ರಗಳಿಗೆ ಗೋವಾ ಮುಖ್ಯಮಂತ್ರಿಯವರಿಂದ ಯಾವುದೇ ಸ್ಪಂದನೆ ದೊರೆಯದೇ ಹೋದಲ್ಲಿ, ಈ ಸಮಸ್ಯೆಯನ್ನು ಬಗೆಹರಿಸಲು ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರ ಮಧ್ಯಸ್ಥಿತಿಕೆಯನ್ನು ಬಯಸಿ, ಕರ್ನಾಟಕ, ಗೋವಾ ಹಾಗೂ ಮಹಾರಾಷ್ಟ್ರ ಮುಖ್ಯಮಂತ್ರಿಗಳ ಸಭೆ ಕರೆಯುವಂತೆ ಆಗ್ರಹಿಸುವ ಸಲುವಾಗಿ ಸರ್ವಪಕ್ಷಗಳ ಮುಖಂಡರ ನಿಯೋಗವನ್ನು ದೆಹಲಿಗೆ ಕರೆದೊಯ್ಯಲು

ನಿರ್ಧರಿಸಿರುವುದಾಗಿ ಪ್ರಕಟಿಸಿದರು. ಅಂತೆಯೇ, ಈ ನಿಯೋಗದಲ್ಲಿ ಭಾರತೀಯ ಜನತಾ ಪಕ್ಷದ ನಾಯಕರೂ ಪಾಲ್ಗೊಳ್ಳಬೇಕು ಎಂದು ಅಪೇಕ್ಷಿಸಿ ಹಾಗೂ ಈ ನಿಟ್ಟಿನಲ್ಲಿ ಸಹಕರಿಸಬೇಕು ಎಂದು ಆಗ್ರಹಿಸಿದರು.

ಮಹದಾಯಿ ಜಲ ವಿವಾದ ಕುರಿತು ವಿಧಾನ ಸೌಧದ ಸಮ್ಮೇಳನ ಸಭಾಂಗಣದಲ್ಲಿ ತಮ್ಮ ಅಧ್ಯಕ್ಷತೆಯಲ್ಲಿ ನಡೆದ ಸರ್ವಪಕ್ಷಗಳ ಸದನ ನಾಯಕರು, ಪ್ರಮುಖ ರಾಜಕೀಯ ಪಕ್ಷಗಳ ಮುಖಂಡರು, ಕೇಂದ್ರ ಸಚಿವರನ್ನು ಒಳಗೊಂಡಂತೆ ಸಂಸತ್ ಸದಸ್ಯರು, ಬೆಳಗಾವಿ, ಬಾಗಲಕೋಟೆ, ಗದಗ, ಧಾರವಾಡ ಮತ್ತು ಹಾವೇರಿ ಜಿಲ್ಲಾ ಉಸ್ತುವಾರಿ ಸಚಿವರು, ಶಾಸಕರು ಹಾಗೂ ರೈತ ಸಂಘಟನೆಗಳ ಪ್ರತಿನಿಧಿಗಳ ಸಭೆಯಲ್ಲಿ ಅವರು ಮಾತನಾಡುತ್ತಿದ್ದರು.

ಮಹದಾಯಿ ನ್ಯಾಯಾಧಿಕರಣದ ಅಧ್ಯಕ್ಷ ನ್ಯಾಯಮೂರ್ತಿ ಜೆ. ಎಂ. ಪಂಚಾಲ್ ಹಾಗೂ ಸದಸ್ಯರಾದ ನ್ಯಾಯಮೂರ್ತಿ ವಿನಯ್ ಮಿತ್ತಲ್ ಹಾಗೂ ನ್ಯಾಯಮೂರ್ತಿ ಪಿ. ಎಸ್. ನಾರಾಯಣ ಅವರನ್ನು ಒಳಗೊಂಡ ಪೀಠವು 2016 ರ ಸೆಪ್ಟೆಂಬರ್ 1 ರಂದು ನಡೆದ ಪ್ರಕರಣದ ಪಾಟೀ ಸವಾಲು ಸಂದರ್ಭದಲ್ಲಿ ಮೂರನೆಯ ಪಕ್ಷದ ಮಧ್ಯಸ್ಥಿಕೆಯೊಂದಿಗೆ ಅಥವಾ ಮಧ್ಯಸ್ಥಿಕೆ ಇಲ್ಲದೆ ಮಾತುಕತೆ ಹಾಗೂ ಸಂಧಾನದ ಮೂಲಕ ಈ ಜಲ ವಿವಾದವನ್ನು ಸೌಹಾರ್ದಯುತವಾಗಿ ಬಗೆಹರಿಸಿಕೊಳ್ಳಿ ಎಂದು ನೀಡಿದ ಸಲಹೆಗೆ ಸಕಾರಾತ್ಮಕವಾಗಿ ಸ್ಪಂದಿಸಿದ ತಾವು ಗೋವಾದ ಅಂದಿನ ಮುಖ್ಯಮಂತ್ರಿ ಲಕ್ಷ್ಮೀಕಾಂತ್ ಪರ್ಸೇಕರ್ ಹಾಗೂ ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಅವರಿಗೆ ಪತ್ರ ಬರೆದು ಈ ಸಂಬಂಧ ಮೂರೂ ರಾಜ್ಯಗಳ ಮುಖ್ಯಮಂತ್ರಿಗಳ ಮೊದಲ ಸುತ್ತಿನ ಮಾತುಕತೆಗೆ ಕರ್ನಾಟಕವು ಆತಿಥೇಯ ರಾಜ್ಯವಾಗಿ ವೇದಿಕೆ ಕಲ್ಪಿಸಲು ಸಿದ್ಧವಿದೆ ಎಂದು ತಿಳಿಸಿದ್ದನ್ನು ಸ್ಮರಿಸಿ, ಈವರೆಗೆ ಗೋವಾಕ್ಕೆ 16 ಬಾರಿ ಪತ್ರ ಬರೆಯಲಾಗಿದೆ. ಆದರೆ, ಗೋವಾದ ಅಂದಿನ ಮುಖ್ಯಮಂತ್ರಿ ಲಕ್ಷ್ಮೀಕಾಂತ್ ಪರ್ಸೇಕರ್ ಹಾಗೂ ಇಂದಿನ ಮುಖ್ಯಮಂತ್ರಿ ಮನೋಹರ್ ಪರಿಕ್ಕರ್ ಅವರು ತಮಗೆ ಉತ್ತರ ಬರೆಯುವ ಸೌಜನ್ಯವನ್ನು ಈವರೆಗೂ ತೋರಿಲ್ಲ ಎಂದು ಸಿದ್ದರಾಮಯ್ಯ ಅವರು ನೊಂದು ನುಡಿದರು.

## ಎಲ್ಲವನ್ನೂ ಸಹಿಸಿಕೊಳ್ಳುವೆ

ಮುಖ್ಯಮಂತ್ರಿಯಾಗಿ ಬರೆದ ತಮ್ಮ ಪತ್ರಕ್ಕೆ ಉತ್ತರಿಸದ ಗೋವಾ ಮುಖ್ಯಮಂತ್ರಿ ಮನೋಹರ್ ಪರಿಕ್ಕರ್ ಅವರು ದ್ವಿ–ಪಕ್ಷೀಯ ಮಾತುಕತೆಯ ಮೂಲಕ ಸಮಸ್ಯೆ ಪರಿಹಾರ ಕಂಡು ಹಿಡಿಯಲು ಒಲವು ತೋರಿರುವುದಾಗಿ ಭಾರತೀಯ ಜನತಾ ಪಕ್ಷದ ರಾಜ್ಯಾಧ್ಯಕ್ಷ ಬಿ. ಎಸ್. ಯಡಿಯೂರಪ್ಪ ಅವರಿಗೆ

ಡಿಸೆಂಬರ್ 21 ರಂದು ಪತ್ರ ಬರೆದು ಒಕ್ಕೂಟದ ವ್ಯವಸ್ಥೆಗೆ ಅಪಚಾರ ಎಸಗಿ ಶಿಷ್ಟಾಚಾರ ಉಲ್ಲಂಘನೆ ಮಾಡಿದ್ದಾರೆ ಎಂದು ಎಲ್ಲರೂ ಬಣ್ಣಿಸಿ ಪ್ರತಿಭಟಿಸಲು ತಿಳಿಸಿದರೂ, ತಮ್ಮ ಬಗ್ಗೆ ಕೆಲವರು ಕೆಟ್ಟದಾಗಿ ಮಾತನಾಡಿದರೂ ಅವಾವನ್ನೂ ಲೆಕ್ಕಿಸದೆ ತಾವು ಮರು ದಿನ ಗೋವಾ ಮುಖ್ಯಮಂತ್ರಿಯವರಿಗೆ ಮತ್ತೆ ಪತ್ರ ಬರೆದು ತಾವು ಸೂಚಿಸುವ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ನಾನು ಮಾತುಕತೆಗೆ ಸಿದ್ಧನಿದ್ದೇನೆ ಎಂದು ತಿಳಿಸಿದ್ದೇನೆ. ರಾಜ್ಯದ ಹಿತಕ್ಕಾಗಿ, ವಿಶೇಷವಾಗಿ ರಾಜ್ಯದ ಜನರ ಹಾಗೂ ರಾಜ್ಯದ ರೈತರ ಹಿತಕ್ಕಾಗಿ ಎಲ್ಲಾ ಅಪಮಾನವನ್ನೂ, ಎಲ್ಲಾ ತರಹದ ಅವಮಾನವನ್ನೂ ಸಹಿಸಿಕೊಳ್ಳುತ್ತೇನೆ ಎಂದು ಗದ್ಗದಿತರಾಗಿ ನುಡಿದ ಸಿದ್ದರಾಮಯ್ಯ ಅವರು ರಾಜ್ಯದ ಹಿತದ ಮುಂದೆ ಎಲ್ಲವೂ ಗೌಣ. ಸಮಸ್ಯೆಗೆ ಪರಿಹಾರ ಕಂಡು ಹಿಡಿಯುವಲ್ಲಿ ಒಣ ಪ್ರತಿಷ್ಠೆಗಳು ಅಡ್ಡಿಬರಬಾರದು ಎಂದು ಹೇಳಿದರು.

ಜಲ ವಿವಾದ ಕುರಿತಂತೆ ಮಹದಾಯಿ ನ್ಯಾಯಾಧಿಕರಣದಲ್ಲಿ ಫೆಬ್ರವರಿ 6 ರಿಂದ ವಿಚಾರಣೆ ಪ್ರಾರಂಭವಾಗಲಿದೆ. ಈ ವಿಚಾರಣೆ ಫೆಬ್ರವರಿ 22 ರ ವರೆಗೆ ನಿರಂತರ ನಡೆಯಲಿದೆ. ಮಾತುಕತೆಯಾಗಲೀ ಅಥವಾ ಸಂಧಾನ ಸಭೆಯಾಗಲೀ ಆ ದಿನಾಂಕಕ್ಕಿಂತಲೂ ಮುನ್ನ ಆಗುವುದು ಸೂಕ್ತ. ಈ ಹಿನ್ನೆಲೆಯಲ್ಲಿ ರಾಜ್ಯದ ನಿಲುವು ಕುರಿತು ಒಮ್ಮತ ಮೂಡಿಸಿ, ಸರ್ಕಾರದ ನಿಲುವನ್ನು ರೂಪಿಸಲು ಸರ್ವಪಕ್ಷಗಳ ಮುಖಂಡರ ಸಭೆಯನ್ನು ಕರೆಯಲಾಗಿದೆ ಎಂದು ಅವರು ತಿಳಿಸಿದರು.

**ನಾವು ಒಪ್ಪಿಸುತ್ತೇವೆ. ನೀವೂ ಒಪ್ಪಿಸುವಿರಾ ?**

ಆದರೆ, ಸಭೆಯಲ್ಲಿ ಪಾಲ್ಗೊಂಡ ಭಾರತೀಯ ಜನತಾ ಪಕ್ಷದ ನಾಯಕರು ಮಾತುಕತೆಗೆ ನಮ್ಮ ಪಕ್ಷದ ನಾಯಕರನ್ನು ನಾವು ಒಪ್ಪಿಸುತ್ತೇವೆ. ನಿಮ್ಮ ಪಕ್ಷದ ನಾಯಕರನ್ನು ನೀವು ಒಪ್ಪಿಸುವಿರಾ ? ಎಂಬ ನಿಲುವನ್ನು ತಳೆದು ಮೊಸರಲ್ಲಿ ಕಲ್ಲು ಹುಡುಕುವ ತಂತ್ರವನ್ನು ಅನುಸರಿಸುತ್ತಿದ್ದಾರೆ. ಅಂತಾರಾಜ್ಯ ಜಲವಿವಾದ ಬಗೆಹರಿಸುವ ವಿಷಯದಲ್ಲಿ ಇಂತಹ ಕರಾರು ಅಥವಾ ಷರತ್ತುಗಳನ್ನು ವಿಧಿಸಿದ ನಿದರ್ಶನವನ್ನು ತಾವು ಎಂದೂ-ಎಲ್ಲೂ ಕಂಡಿಲ್ಲ ಎಂದು ಮುಖ್ಯಮಂತ್ರಿ ಹೇಳಿದರು.

ಒಕ್ಕೂಟದ ವ್ಯವಸ್ಥೆಯಲ್ಲಿ ರಾಜ್ಯದ ಮುಖ್ಯಮಂತ್ರಿಯಾದವರು ಆ ರಾಜ್ಯದ ಎಲ್ಲಾ ಪಕ್ಷಗಳ ನಾಯಕರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ರಾಜ್ಯದ ನಿಲುವನ್ನು ರೂಪಿಸಿಕೊಳ್ಳಬೇಕು ಹಾಗೂ ರಾಜ್ಯದ ನಿಲುವನ್ನು ಪ್ರಕಟಿಸಬೇಕು. ಕರ್ನಾಟಕದಲ್ಲಿ ನೆಲ-ಜಲ, ನುಡಿ-ಗಡಿ ವಿಚಾರದಲ್ಲಿ ನಾವೆಲ್ಲರೂ ಒಂದಾಗುವುದಿಲ್ಲವೇ ? ಅದೇ ಮಾದರಿಯಲ್ಲಿ ಗೋವಾ ಮುಖ್ಯಮಂತ್ರಿಯವರು ತಮ್ಮ ರಾಜ್ಯದ ಎಲ್ಲಾ ಪಕ್ಷಗಳ ನಾಯಕರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಮಾನವೀಯ ದೃಷ್ಟಿಯಿಂದ ಕುಡಿಯುವ ನೀರು ಬಿಡುಗಡೆಗೆ

ಅನುವುಮಾಡಿಕೊಡಬೇಕಾದುದು ಅವರ ಕರ್ತವ್ಯ ಮತ್ತು ಜವಾಬ್ದಾರಿ. ದೆಹಲಿಯಲ್ಲಿ ನಡೆದ ಸಭೆಯೊಂದರಲ್ಲಿ ಎದುರಾದ ಗೋವಾ ಮುಖ್ಯಮಂತ್ರಿಯವರನ್ನು ಭೇಟಿಯಾಗಿ ಮಾತುಕತೆ ಕುರಿತಂತೆ ಮನವಿ ಮಾಡಿದೆ. ಆದರೆ, ಅವರು ಸಕಾರಾತ್ಮಕವಾಗಿಯೂ ಸ್ಪಂದಿಸಲಿಲ್ಲ. ನಕಾರಾತ್ಮಕವಾಗಿಯೂ ಪ್ರತಿಕ್ರಿಯಿಸಲಿಲ್ಲ. ಮೌನ ಮುರಿಯದೇ ಸಮಸ್ಯೆಯ ಪರಿಹಾರಕ್ಕೆ ಉತ್ಸುಕತೆ ತೋರಲೇ ಇಲ್ಲ ಎಂದು ಸಿದ್ದರಾಮಯ್ಯ ಅವರು ಸಭೆಗೆ ತಿಳಿಸಿದರು.

ಗೋವಾ ಪರ ವಕಾಲತ್ತು ವಹಿಸಿರುವ ಆತ್ಮಾರಾಮ್ ನಾಡಕರ್ಣಿ ಅವರು ಕೇಂದ್ರ ಸರ್ಕಾರದ ಪರಿಸರ ಮಂತ್ರಾಲಯದಲ್ಲಿ ಸಲಹಾಗಾರರಾಗಿರುವ ಹಿನ್ನೆಲೆಯಲ್ಲಿ ನೈತಿಕತೆಯ ಆಧಾರದ ಮೇರೆಗೆ ಅವರನ್ನು ಬದಲಾಯಿಸಬೇಕು ಎಂದು ಲಿಖಿತವಾಗಿ ಆಕ್ಷೇಪಣೆ ಸಲ್ಲಿಸಬೇಕೆಂದು ಸಭೆಯಲ್ಲಿ ಅಭಿಪ್ರಾಯ ವ್ಯಕ್ತವಾಯಿತು.

ಕೇಂದ್ರ ಸಾಂಖ್ಯಿಕ ಮತ್ತು ಕಾರ್ಯಕ್ರಮ ಅನುಷ್ಠಾನ ಸಚಿವ ಡಿ. ವಿ. ಸದಾನಂದಗೌಡ, ಜಲ ಸಂಪನ್ಮೂಲ ಸಚಿವ ಎಂ. ಬಿ. ಪಾಟೀಲ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಹೆಚ್. ಕೆ. ಪಾಟೀಲ್, ಸಣ್ಣ ನೀರಾವರಿ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಟಿ. ಬಿ. ಜಯಚಂದ್ರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವೆ ಉಮಾಶ್ರೀ, ಸಣ್ಣ ಕೈಗಾರಿಕಾ ಸಚಿವ ರಮೇಶ್ ಎಲ್ ಜಾರಕಿಹೊಳಿ, ಗಣಿ ಮತ್ತು ಭೂ ವಿಜ್ಞಾನ ಸಚಿವ ವಿನಯ್ ಕುಲಕರ್ಣಿ, ರಾಜ್ಯ ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಕೆ. ಎಸ್. ಈಶ್ವರಪ್ಪ, ರಾಜ್ಯ ವಿಧಾನ ಸಭೆಯ ಪ್ರತಿಪಕ್ಷ ನಾಯಕ ಜಗದೀಶ್ ಶೆಟ್ಟರ್, ಲೋಕಸಭಾ ಸದಸ್ಯರಾದ ಪ್ರಹ್ಲಾದ್ ಜೋಶಿ, ಸುರೇಶ್ ಅಂಗಡಿ, ಶಿವಕುಮಾರ್ ಉದಾಸಿ, ರಾಜ್ಯ ವಿಧಾನ ಸಭೆಯ ಆಡಳಿತ ಪಕ್ಷದ ಮುಖ್ಯ ಸಚೇತಕ ಅಶೋಕ ಎಂ ಪಟ್ಟಣ್, ಶಾಸಕರಾದ ಎನ್. ಹೆಚ್. ಕೋನರೆಡ್ಡಿ, ಬಸವರಾಜ ಬೊಮ್ಮಾಯಿ, ಹೆಚ್. ವೈ ಮೇಟಿ, ಹಂಪನಗೌಡ ಬಾದರ್ಲಿ ಹಾಗೂ ಕೆ. ಎಸ್. ಪುಟ್ಟಣ್ಣಯ್ಯ ಅವರು ಸಭೆಯಲ್ಲಿ ಪಾಲ್ಗೊಂಡಿದ್ದರು.

ಅಲ್ಲದೆ, ಪ್ರಪ್ರಥಮವಾಗಿ ಶಾಸನ ಸಭೆಯಲ್ಲಿ ಸ್ಥಾನ ಪಡೆಯದೇ ಇರುವ ಪಕ್ಷಗಳ ಪ್ರತಿನಿಧಿಗಳಾದ ಜನತಾದಳ ಸಂಯುಕ್ತ ಪಕ್ಷದ ರಾಜ್ಯಾಧ್ಯಕ್ಷ ಡಾ ಎಂ. ಪಿ. ನಾಡಗೌಡ, ಕಮ್ಯುನಿಸ್ಟ್ ಪಾರ್ಟಿ ಆಫ್ ಇಂಡಿಯಾದ ಕಾರ್ಯದರ್ಶಿ ಪಿ ವಿ ಲೋಕೇಶ್, ಕಮ್ಯುನಿಸ್ಟ್ ಪಾರ್ಟಿ ಆಫ್ ಇಂಡಿಯಾ (ಮಾರ್ಕ್ಸಿಸ್ಟ್) ಪಕ್ಷದ ಕಾರ್ಯದರ್ಶಿ ಜಿ. ವಿ. ಶ್ರೀರಾಮರೆಡ್ಡಿ ಹಾಗೂ ಬಹುಜನ ಸಮಾಜ ಪಕ್ಷದ ರಾಜ್ಯಾಧ್ಯಕ್ಷ ಎನ್. ಮಹೇಶ್ ಅವರನ್ನು ಸಭೆಗೆ ಆಮಂತ್ರಿಸಲಾಗಿತ್ತು. ತಮ್ಮನ್ನು ಸಭೆಗೆ ಆಮಂತ್ರಿಸಿದ್ದಕ್ಕೆ ಈ ಮಹನೀಯರು ಸರ್ಕಾರಕ್ಕೆ, ವಿಶೇಷವಾಗಿ ಮುಖ್ಯಮಂತ್ರಿಗೆ, ಅಭಿನಂದನೆ ಸಲ್ಲಿಸಿದರು.

ವೀರೇಶ್ ಸೊಬರದ ಮಠ ಸೇರಿದಂತೆ ರೈತ ಮುಖಂಡರು ಮತ್ತು ಹೋರಾಟಗಾರರು, ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಕೆ ರತ್ನಪ್ರಭಾ, ಜಲ ಸಂಪನ್ಮೂಲ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ರಾಕೇಶ್ ಸಿಂಗ್, ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ ಎಲ್. ಕೆ. ಅತೀಕ್, ಅಡ್ವೋಕೇಟ್ ಜನರಲ್ ಮಧುಸೂದನ್ ನಾಯಕ್ ಒಳಗೊಂಡಂತೆ ಕಾನೂನು ತಜ್ಞರು ಹಾಗೂ ಹಿರಿಯ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದರು.

**************

ಡಿ ಪಿ ಎಂ